# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 694 (756)
2. ಮಾನ್ಯ ಸದಸ್ಯರ ಹೆಸರು : ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 21.08.2026
4. ಉತ್ತರಿಸಬೇಕಾದ ಸಚಿವರು : ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>(ಅ)</td><td>ರಾಜ್ಯದ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಪ್ರಾಧ್ಯಾಪಕರು ಹಾಗೂ ಸಹ ಪ್ರಾಧ್ಯಾಪಕರ ಮಂಜೂರಾದ ಹುದ್ದೆಗಳು ಎಷ್ಟು; ಪ್ರಸ್ತುತ ಎಷ್ಟು ಹುದ್ದೆಗಳು ಖಾಲಿ ಇವೆ;</td><td>ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಪ್ರಾಧ್ಯಾಪಕರು ಹಾಗೂ ಸಹ ಪ್ರಾಧ್ಯಾಪಕರು ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತಿವೆ.
<table>
<tr><th>ಹುದ್ದೆಗಳ ಹೆಸರು</th><th>ಮಂಜೂರಾದ ಹುದ್ದೆಗಳು</th><th>ಖಾಲಿ ಇರುವ ಹುದ್ದೆಗಳು</th></tr>
<tr><td>ಪ್ರಾಧ್ಯಾಪಕರು</td><td>759</td><td>279</td></tr>
<tr><td>ಸಹ ಪ್ರಾಧ್ಯಾಪಕರು</td><td>1053</td><td>453</td></tr>
</table></td></tr>
<tr><td>(ಆ)</td><td>ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಸಿಬ್ಬಂದಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ನೇಮಕಾತಿ ಪೂರ್ಣಗೊಳ್ಳುವ ನಿರೀಕ್ಷಿತ ಅವಧಿ ಎಷ್ಟು;</td><td>ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ಈಗಾಗಲೇ 22 ಸಂಸ್ಥೆಗಳಲ್ಲಿ 15 ಸಂಸ್ಥೆಗಳ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅದರಲ್ಲಿ 13 ಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ನೇಮಕಾತಿ ಸಲುವಾಗಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಉಳಿದ 07 ಸಂಸ್ಥೆಗಳ ವೃಂದ ಮತ್ತು ನೇಮಕಾತಿ ರಚನೆ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ಕೂಡಲೇ ಖಾಲಿ ಹುದ್ದೆಗಳ ಭರ್ತಿಗೆ ಕ್ರಮವಹಿಸಲಾಗುವುದು.<br><br>ಆದಷ್ಟು ಶೀಘ್ರವಾಗಿ ನೇಮಕಾತಿ ಪೂರ್ಣಗೊಳಿಸಲಾಗುವುದು.</td></tr>
</table>

| | | |
|---|---|---|
| (ಇ) | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಬೋಧಕ ಸಿಬ್ಬಂದಿಗೆ ಕಾಲಮಿತಿಯಲ್ಲಿ ಬಡ್ತಿ ನೀಡಲಾಗುತ್ತಿದೆಯೇ; ಬಡ್ತಿಗೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು; | ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿದಲ್ಲಿರುವ ಬೋದಕ ಸಿಬ್ಬಂದಿಗೆ ಕಾಲಮಿತಿಯಲ್ಲಿ ಬಡ್ತಿ ನೀಡಲಾಗುತ್ತಿದೆ. ನಿಗದಿತ ಅವಧಿಗೆ ಅನುಗುಣವಾಗಿ ಪದೋನ್ನತಿ ಹುದ್ದೆಗಳು ಖಾಲಿ ಇಲ್ಲದ ಪಕ್ಷದಲ್ಲಿ ಕಾಲಿಕ ವೇತನ ಬಡ್ತಿಯನ್ನು ಪದೋನ್ನತಿ ಸಮಿತಿಯಲ್ಲಿ ಪರಿಶೀಲಿಸಿ ನೀಡಲಾಗುತ್ತಿದೆ.<br><br>ಕಾಲಮಿತಿ ವೇತನ ಬಡ್ತಿಗೆ ಬಾಕಿ ಇರುವ ಪ್ರಕರಣಗಳ ಸಂಖ್ಯೆ: 15 |
| (ಈ) | ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಬೋಧಕ ಸಿಬ್ಬಂದಿಯ ಕೊರತೆಯಿಂದ ವಿದ್ಯಾರ್ಥಿಗಳ ವೈದ್ಯಕೀಯ ಶಿಕ್ಷಣ ಮತ್ತು ತರಬೇತಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಬೋಧಕ ಸಿಬ್ಬಂದಿ ಹುದ್ದೆ ಖಾಲಿ ಇದ್ದಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಮೂಲಕ ಕ್ರಮವಹಿಸಲಾಗುತ್ತಿದ್ದು, ಇದರಿಂದಾಗಿ ವಿದ್ಯಾರ್ಥಿಗಳ ವೈದ್ಯಕೀಯ ಶಿಕ್ಷಣ ಮತ್ತು ತರಬೇತಿಗೆ ಯಾವುದೇ ರೀತಿಯ ತೊಂದರೆಯಾಗಿರುವುದಿಲ್ಲ. |
| (ಉ) | ವೈದ್ಯಕೀಯ ಕಾಲೇಜುಗಳ ಬೋಧಕ ಸಿಬ್ಬಂದಿಗೆ ಸಂಶೋಧನೆ, ಉನ್ನತ ಶಿಕ್ಷಣ ಮತ್ತು ತರಬೇತಿಗೆ ಅವಕಾಶ ಕಲ್ಪಿಸಲು ಸರ್ಕಾರ ಯಾವುದೇ ವಿಶೇಷ ಯೋಜನೆ ರೂಪಿಸಿದೆಯೇ; ರೂಪಿಸಿದ್ದಲ್ಲಿ, ಮಾನದಂಡಗಳೇನು? | ಯಾವುದೇ ವಿಶೇಷ ಯೋಜನೆ ರೂಪಿಸಿರುವುದಿಲ್ಲ. ಆದರೆ ಬೋಧಕ ಸಿಬ್ಬಂದಿಗಳು ಉನ್ನತ ವ್ಯಾಸಂಗಕ್ಕೆ ತೆರಳಲು ಇಚ್ಚಿಸಿದಲ್ಲಿ ಅವರ ಉನ್ನತ ವ್ಯಾಸಂಗದ ತಜ್ಞತೆಯು ರೋಗಿಗಳಿಗೆ ಉಪಯೋಗವಾಗುವುದಾದಲ್ಲಿ ಅವರಿಗೆ ಸರ್ಕಾರದ ವೆಚ್ಚ ಅಥವಾ ಸ್ವಂತ ವೆಚ್ಚದಲ್ಲಿ ತೆರಳಲು KCSR ನಿಯಾಮಾನುಸಾರ ನಿಯೋಜನೆಗೊಳಿಸಲಾಗುತ್ತದೆ. ವ್ಯಾಸಂಗದ ನಂತರ ಅವರ ತಜ್ಞತೆಯ ಹುದ್ದೆ ಖಾಲಿ ಇದ್ದಲ್ಲಿ ಸದರಿ ಹುದ್ದೆಗೆ ಅವರನ್ನು ನೇಮಿಸಿ ರೋಗಿಗಳಿಗೆ ಗುಣಮಟ್ಟದ ಸೇವೆ ಸಿಗುವಂತೆ ನೋಡಿಕೊಳ್ಳಲಾಗುತ್ತಿದೆ. |

**ಸಂಖ್ಯೆ:** ಎಂಇಡಿ 274 ಆರ್‌ಐ 2026

**(ಡಾ. ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.